155 ನೇ ಸಿ ಸಿ
81
4/RR
19/05/20

**ವಿಧಾನಪರಿಷತ್ ಸದಸ್ಯರುಗಳಾದ ಮಾನ್ಯ ಶ್ರೀ ಎಸ್.ವ್ಹಿ.ಸಂಕನೂರ, ಡಾ:ತಳವಾರ್ ಸಾಬಣ್ಣ ಹಾಗೂ ಇತರರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ**

**ವಿಷಯ:-**

**ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ 2006 ರ ನಂತರ ನೇಮಕಗೊಂಡ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗೆ ಪಿಂಚಣಿ ಸೌಲಭ್ಯ ನೀಡದೇ ಇರುವುದರಿಂದ ಅವರು ಕಷ್ಟದ ಜೀವನ ಸಾಗಿಸುತ್ತಿರುವ ಕುರಿತು.**

**ಉತ್ತರ:**

ದಿನಾಂಕ: 01.04.2006ರ ನಂತರ ನೇಮಕಾತಿ ಹೊಂದಿದ ಸಿಬ್ಬಂದಿಗಳಿಗೆ ಕಡ್ಡಾಯವಾಗಿ ಸರ್ಕಾರದ ಆದೇಶ ಸಂಖ್ಯೆ:FD (SPL)04 PET 2005 ದಿನಾಂಕ: 01.04.2006ರನ್ವಯ ನೂತನ ಪಿಂಚಣಿ ಯೋಜನೆ ಅನ್ವಯವಾಗುತ್ತದೆ. ದಿನಾಂಕ:01.04.2006ರ ಪಿಂಚಣಿ ನೀತಿಯಲ್ಲಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಮೇಲ್ಕಂಡ ಆದೇಶದ ಕ್ರಮ ಸಂಖ್ಯೆ 8ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ.

**...(8) ಸಹಾಯಾನುದಾನದ ಶಿಕ್ಷಣ ಸಂಸ್ಥೆಗಳ ನೌಕರರಿಗೆ ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು ದಿನಾಂಕ: 01.04.2006ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿಬಿಡತಕ್ಕದ್ದು. ನೂತನ ನಿಗಧಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲೆ ನೌಕರನಿಗೆ ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕದ್ದು, ಆದರೆ ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕದ್ದು. ಆದರೆ ರಾಜ್ಯ ಸರ್ಕಾರವಲ್ಲ. ಈ ಆದೇಶವು ದಿನಾಂಕ: 01.04.2006ರಿಂದ ಜಾರಿಗೆ ಬಂದಿರುತ್ತದೆ.**

ದಿನಾಂಕ:01.04.2006ರ ನಂತರ ಅನುದಾನ ಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ.

ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನ ಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ ಅನ್ವಯವಾಗುತ್ತದೆ. ಆದುದರಿಂದ, 2006ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01.04.2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ(NPS) ವ್ಯಾಪ್ತಿಗೆ ಒಳಪಡುತ್ತಾರೆ. ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ ನೆಲೆಯಲ್ಲಿ ಪಿಂಚಣಿ (Optional) ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ.

ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು / ಸಿಬ್ಬಂದಿಗಳಿಗೆ ನೂತನ ಪಿಂಚಣಿ ಯೋಜನೆಯ ಆಡಳಿತ ಮಂಡಳಿ ವಂತಿಕೆಯನ್ನು ಸಂಬಂಧಪಟ್ಟ ಆಡಳಿತ ಮಂಡಳಿಗೆ ಪಾವತಿ ಮಾಡದಿರುವುದರಿಂದ ಖಾಸಗಿ ಅನುದಾನಿತ ಶಾಲೆಗಳ ಸಿಬ್ಬಂದಿಗಳಿಗೆ ಹೊಸ ಪಿಂಚಣಿ ಯೋಜನೆ(NPS) ಜಾರಿಯಾಗಿರುವುದಿಲ್ಲ. ಆಡಳಿತ ಮಂಡಳಿತ ವಂತಿಕೆಯನ್ನು ಸರ್ಕಾರವೇ ಭರಿಸುವ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಆರ್ಥಿಕ ಇಲಾಖೆಯು ಈ ಕೆಳಕಂಡಂತೆ ಅಭಿಪ್ರಾಯಿಸಿರುತ್ತದೆ:

" ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳಿಗೆ ಆಯಾ ಆಡಳಿತ ಮಂಡಳಿಯು ನೇಮಕಾತಿ ಪ್ರಾಧಿಕಾರವಾಗಿದ್ದು, ಸರ್ಕಾರ ಮತ್ತು ಸದರಿ ಸಿಬ್ಬಂದಿಗಳ ನಡುವೆ ಯಾವುದೇ ಉದ್ಯೋಗದಾತ ಮತ್ತು ಉದ್ಯೋಗಿ ಸಂಬಂಧವಿರುವುದಿಲ್ಲ. ದಿನಾಂಕ:01.04.2006 ಕ್ಕೂ ಪೂರ್ವದಲ್ಲಿ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳ ಸಂಬಂಧದಲ್ಲಿ TBS ನಿಯಮಾವಳಿಗಳು ಅನ್ವಯವಾಗುತ್ತಿತ್ತು. ದಿನಾಂಕ:01.04.2006 ರ ನಂತರ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳ ಸಂಬಂಧದಲ್ಲಿ ಈ ನಿಯಮಗಳು ಅನ್ವಯವಾಗುವುದಿಲ್ಲ. ಆದುದರಿಂದ, ದಿನಾಂಕ:01.04.2006 ರ ನಂತರ ನೇಮಕಾತಿ ಹೊಂದಿದ ಅನುದಾನಿತ ಸಿಬ್ಬಂದಿಗಳಿಗೆ ಪಿಂಚಣಿಯನ್ನು ಪಾವತಿಸುವುದು ಸರ್ಕಾರದ ಹೊಣೆಯಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ, ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ NPS ಉದ್ಯೋಗಾದಾತನ ವಂತಿಗೆಯನ್ನು ಆಯಾ ಆಡಳಿತ ಮಂಡಳಿಗಳೇ ಭರಿಸಬೇಕೆಂದು ಆರ್ಥಿಕ ಇಲಾಖೆಯು ಅಭಿಪ್ರಾಯಿಸಿದೆ."

**ಸಂಖ್ಯೆ: ಇಪಿ 96 ಎಸ್‌ಇಎಸ್ 2025**

**(ಎಸ್ ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**